# ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು

## ಅಧಿಸೂಚನೆ

## ಸಂಖ್ಯೆ HCRB/TYP-10/2021 ದಿನಾಂಕ 27ನೇ ಅಕ್ಟೋಬರ್ 2021

## ಬೆರಳಚ್ಚುಗಾರರ ಹುದ್ದೆಗಳಿಗಾಗಿ ಅಭ್ಯರ್ಥಿಗಳ ನೇಮಕಾತಿ

## ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 27ನೇ ನವೆಂಬರ್ 2021

ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ, **150** ಬೆರಳಚ್ಚುಗಾರರ ಹುದ್ದೆಗಳಿಗೆ ಅರ್ಜಿಗಳನ್ನು ಸ್ವೀಕರಿಸುವುದಕ್ಕೆ ನಿಗದಿಪಡಿಸಿರುವ ಕೊನೆಯ ದಿನಾಂಕದವರೆಗೂ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಕರ್ನಾಟಕ ಉಚ್ಚ ನ್ಯಾಯಾಲಯದ ವೆಬ್‌ಸೈಟ್ ***https://karnatakajudiciary.kar.nic.in/recruitment.php*** ಮೂಲಕ ಸಲ್ಲಿಸಬಹುದೆಂದು ಅಧಿಸೂಚಿಸಲಾಗಿದೆ.

೧. **ನೇಮಕಾತಿಯ ವಿಧಾನ :**

ಅಭ್ಯರ್ಥಿಗಳ ಆಯ್ಕೆಯನ್ನು **ಕಾಲಕಾಲಕ್ಕೆ ತಿದ್ದುಪಡಿ ಮಾಡಲಾದ** ಕರ್ನಾಟಕ ಉಚ್ಚ ನ್ಯಾಯಾಲಯ ಸೇವಾ (ಸೇವಾ ಮತ್ತು ನೇಮಕಾತಿ ಷರತ್ತುಗಳು) ನಿಯಮಗಳು, 1973 ಮತ್ತು **ಕಾಲಕಾಲಕ್ಕೆ ತಿದ್ದುಪಡಿ ಮಾಡಲಾದ** ಕರ್ನಾಟಕ ಉಚ್ಚ ನ್ಯಾಯಾಲಯ ಸೇವಾ (ಆಯ್ಕೆಯ ಮೂಲಕ ನೇರ ನೇಮಕಾತಿ) ನಿಯಮಗಳು, 1984 ಇವುಗಳ ಅನುಸಾರವಾಗಿ ಮಾಡಲಾಗುವುದು.

೨. **ಕನಿಷ್ಠ ವಿದ್ಯಾರ್ಹತೆ :**

೧) ಅಭ್ಯರ್ಥಿಗಳು ಯಾವುದೇ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ವಿಜ್ಞಾನ / ಕಲೆ / ವಾಣಿಜ್ಯ / ವ್ಯವಹಾರ ನಿರ್ವಹಣೆ (Business Management)/ ಕಂಪ್ಯೂಟರ್ ಅಪ್ಲಿಕೇಷನ್ಸ್ ವಿಷಯಗಳ ಪದವಿಯಲ್ಲಿ, ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಕನಿಷ್ಟ ಶೇಕಡ 55 ರಷ್ಟು ಅಂಕಗಳನ್ನು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಕನಿಷ್ಠ ಶೇಕಡ 50 ರಷ್ಟು ಅಂಕಗಳೊಂದಿಗಿನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

೨) ಆಂಗ್ಲ ಮತ್ತು ಕನ್ನಡದಲ್ಲಿ ಹಿರಿಯ ದರ್ಜೆ ಬೆರಳಚ್ಚು ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದರೊಂದಿಗೆ ಕಂಪ್ಯೂಟರ್ ನಿರ್ವಹಣಾ ಜ್ಞಾನ ಹೊಂದಿರುವುದು ಅತ್ಯಾವಶ್ಯಕವಾಗಿರುತ್ತದೆ.

**ಟಿಪ್ಪಣಿ : ಕಂಪ್ಯೂಟರ್ ನಿರ್ವಹಣಾ ಜ್ಞಾನ ಎಂದರೆ ಕಂಪ್ಯೂಟರ್ ಶಿಕ್ಷಣ ನೀಡುವ ಸಂಸ್ಥೆಯು ಪ್ರಧಾನ ಮಾಡುವ ಕಂಪ್ಯೂಟರ್ ಬೇಸಿಕ್ಸ್ ಕೋರ್ಸಿನ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.**

**ಮುಂದುವರಿದಿದೆ...**

೩. <u>ವೇತನ ಶ್ರೇಣಿ</u> :

ಕರ್ನಾಟಕ ಉಚ್ಚ ನ್ಯಾಯಾಲಯದ (ಅಧಿಕಾರಿ ಮತ್ತು ನೌಕರರ) ಪರಿಷ್ಕೃತ ವೇತನ ಶ್ರೇಣಿ ನಿಯಮ 2018 ಅನುಸಾರ ಅಂಗೀಕೃತ ಭತ್ಯೆಗಳೊಂದಿಗೆ ₹25500 – 81100 (ದರ್ಜೆ–4).

೪. <u>ಸೇವಾ ಪರಿವೀಕ್ಷಣಾ ಅವಧಿ</u> :

ಅಭ್ಯರ್ಥಿಯು ನೇಮಕಗೊಂಡ ಪಕ್ಷದಲ್ಲಿ ಪ್ರಾರಂಭಿಕವಾಗಿ ಎರಡು ವರ್ಷಗಳ ಅವಧಿಗೆ ಅಥವಾ ಅಗತ್ಯವಿದ್ದರೆ ವಿಸ್ತರಿಸಬಹುದಾದ ಅವಧಿಗೆ ಪರಿವೀಕ್ಷಣಾರ್ಥಿಗಳಾಗಿರುತ್ತಾರೆ.

೫. <u>ವಯೋಮಿತಿ</u> :

(೧) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕದಂದು ಎಲ್ಲಾ ಪ್ರವರ್ಗದವರು ಕನಿಷ್ಠ 18 ವರ್ಷದವರಾಗಿರಬೇಕು ಮತ್ತು ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು:

(ಎ) **ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಅಥವಾ ಇತರೇ ಹಿಂದುಳಿದ ಜಾತಿಗಳ ಪ್ರವರ್ಗ – 1 ಕ್ಕೆ ಸೇರಿದ ಪಕ್ಷದಲ್ಲಿ ಅವರು ಗರಿಷ್ಠ 40 ವರ್ಷ ವಯಸ್ಸು ಮೀರಿರಬಾರದು.**

(ಬಿ) **ಇತರೇ ಹಿಂದುಳಿದ ವರ್ಗಗಳ ಪ್ರವರ್ಗ '2ಎ' ಅಥವಾ '2ಬಿ' ಅಥವಾ '3ಎ' ಅಥವಾ '3ಬಿ'ಗೆ ಸೇರಿದ್ದಲ್ಲಿ ಗರಿಷ್ಠ 38 ವರ್ಷ ವಯಸ್ಸು ಮೀರಿರಬಾರದು; ಮತ್ತು**

(ಸಿ) **ಸಾಮಾನ್ಯ ಅಭ್ಯರ್ಥಿಗಳಿಗೆ 35 ವರ್ಷ ವಯಸ್ಸು ಮೀರಿರಬಾರದು.**

(೨) ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ೬(೨)ನೇ ನಿಯಮದ ಅನುಸಾರ. ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಸಡಿಲಿಕೆ ಮಾಡಲಾಗುವುದು.

(ಎ) ಅಭ್ಯರ್ಥಿಯು, ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೇರೆಗೆ ಸ್ಥಾಪಿತವಾದ ಅಥವಾ ರಾಜ್ಯ ಅಥವಾ ಕೇಂದ್ರ ಅಧಿನಿಯಮದಡಿಯಲ್ಲಿ ಸರ್ಕಾರದ ಮೂಲಕ ಸ್ಥಾಪಿತವಾದ ಮತ್ತು ಸರ್ಕಾರದ ಅಧೀನದಲ್ಲಿ ಅಥವಾ ನಿಯಂತ್ರಣದಲ್ಲಿ ಇರುವ ಸರ್ಕಾರಿ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪಕ್ಷದಲ್ಲಿ ಅಥವಾ ಯಾವುದೇ ಹುದ್ದೆಯನ್ನು ಹೊಂದಿದ್ದಲ್ಲಿ ಹಾಗೆ ಸಲ್ಲಿಸಿರುವ ಅವಧಿ ಅಥವಾ 10 ವರ್ಷ ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ವಯೋಮಿತಿಯ ಸಡಿಲಿಕೆಗೆ ಅರ್ಹರಾಗಿರುತ್ತಾರೆ.

**ಮುಂದುವರಿದಿದೆ...**

(ಬಿ) ಮಾಜಿ ಸೈನಿಕರಿಗೆ, ಕೇಂದ್ರ ಸಶಸ್ತ್ರ ಪಡೆಯಲ್ಲಿ ಅವರು ಸೇವೆ ಸಲ್ಲಿಸಿದ ಅವಧಿಯ ವರ್ಷಗಳ ಜೊತೆಗೆ ಮೂರು ವರ್ಷಗಳು ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

(ಸಿ) ಅಭ್ಯರ್ಥಿಯು ದೈಹಿಕ ಅಂಗವಿಕಲತೆ ಹೊಂದಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(ಡಿ) ಅಭ್ಯರ್ಥಿಯು ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ.

(೩) ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾದ ಕೊನೆಯ ದಿನಾಂಕವನ್ನು ಆಧರಿಸಿರುತ್ತದೆ. ಅಂದರೆ ಅನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ **27ನೇ ನವೆಂಬರ್ 2021** ಅನ್ನು ಆಧರಿಸಿರುತ್ತದೆ..

೬. **<u>ಖಾಲಿ ಹುದ್ದೆಗಳ ವರ್ಗೀಕರಣ</u> :**

**ಉಳಿದ ಮೂಲವೃಂದದ – 137 ಹುದ್ದೆಗಳು**

| ಪ್ರವರ್ಗ | ಮೀಸಲು ರಹಿತ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ | ಅಂಗವಿಕಲರು | ಯೋಜನಾ ನಿರಾಶ್ರಿತರು | ಮಾಜಿ ಸೈನಿಕ | ಇತರೆ** | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | 12 | 22 | 18 | 3 | 4# | 3 | 6 | - | **68** |
| ಪರಿಶಿಷ್ಟ ಜಾತಿ | 3 | 7 | 5 | 1 | 1# | 1 | 2 | - | **20** |
| ಪರಿಶಿಷ್ಟ ಪಂಗಡ | - | 2 | 1 | - | - | - | 1 | - | **4** |
| ಪ್ರವರ್ಗ–I | - | 3 | 2 | 1 | - | - | - | - | **6** |
| ಪ್ರವರ್ಗ–II (ಎ) | 3 | 7 | 5 | 1 | 1# | 2 | 2 | - | **21** |
| ಪ್ರವರ್ಗ–II (ಬಿ) | - | 3 | 1 | 1 | - | - | - | - | **5** |
| ಪ್ರವರ್ಗ–III (ಎ) | - | 3 | 1 | 1 | - | - | 1 | - | **6** |
| ಪ್ರವರ್ಗ–III (ಬಿ) | - | 3 | 2 | 1 | - | 1 | - | - | **7** |
| ಒಟ್ಟು | **18** | **50** | **35** | **9** | **6** | **7** | **12** | - | **137** |

* ಚಿಹ್ನೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಸೂಚಿಸುತ್ತದೆ.

** ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 179 ಸೆನೆನಿ 2020 ದಿನಾಂಕ 14.07.2021 ರ ಪ್ರಕಾರ "ಇತರೆ" ವರ್ಗೀಕರಣವನ್ನು ಮಾಡಲಾಗಿದೆ.

ಮುಂದುವರಿದಿದೆ...

***# indicates the classification of vacancies under persons with benchmark disability and the same is made as per Government Order No. DPAR 149 SRR 2020, dated 25.09.2020 details of which is as under:***

| **Category** | **Point No. and No. of post** | **Nature of Disability** |
|---|---|---|
| General Merit<br>4 posts | 1 post<br>Horizontal Point No. 24 | Locomotor disability including cerebral palsy, leprosy cures, dwarfism, acid attack victims and muscular dystrophy. |
| | 1 post<br>Horizontal Point No. 44 | Deaf and hard of hearing |
| | 1 Post<br>Horizontal Point No. 64 | a) Autism, intellectual disability, specific learning disability and mental illness<br><br>b) Multiple disabilities from amongst persons under clauses (a) to (d) of as per Government Order No. DPAR 149 SRR 2020, dated 25.09.2020 including deaf-blindness in the posts identifies of each disabilities. |
| | 1 Post<br>Horizontal Point No. 84 | Locomotor disability or cerebral palsy |
| Scheduled Caste | 1 post<br>Horizontal Point No. 44 | Deaf and hard of hearing |
| Category II (A) | 1 post<br>Horizontal Point No. 44 | Deaf and hard of hearing |

ಮುಂದುವರಿದಿದೆ...

**ಸ್ಥಳೀಯ ವೃಂದಗಳ 13 ಹುದ್ದೆಗಳು**
**(ಅಂದರೆ ಸಂವಿಧಾನದ 371–(ಜೆ) ಅನುಚ್ಛೇದದಡಿಯಲ್ಲಿ**
**ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಾತಿ)**
**(2 ಬ್ಯಾಕ್‌ಲಾಗ್ ಹುದ್ದೆಗಳನ್ನೊಳಗೊಂಡು)**

| ಪ್ರವರ್ಗ | ಮೀಸಲು ರಹಿತ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಕನ್ನಡ ಮಾಧ್ಯಮ | ಅಂಗವಿಕಲರು | ಯೋಜನಾ ನಿರಾಶ್ರಿತರು | ಮಾಜಿ ಸೈನಿಕ | ಇತರೆ** | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ ಅಭ್ಯರ್ಥಿ | - | 2 | 1 | - | - | 1 | - | 1 | **5** |
| ಪರಿಶಿಷ್ಟ ಜಾತಿ | - | - | 1 | - | - | - | - | - | **1** |
| ಪರಿಶಿಷ್ಟ ಪಂಗಡ | 1* | 1 | - | - | - | - | - | - | **2** |
| ಪ್ರವರ್ಗ–I | - | 1 | - | - | - | - | - | - | **1** |
| ಪ್ರವರ್ಗ–II (ಎ) | - | 1 | 1 | - | - | - | - | - | **2** |
| ಪ್ರವರ್ಗ–II (ಬಿ) | - | 1 | - | - | - | - | - | - | **1** |
| ಪ್ರವರ್ಗ–III (ಎ) | 1* | - | - | - | - | - | - | - | **1** |
| ಪ್ರವರ್ಗ–III (ಬಿ) | - | - | - | - | - | - | - | - | **-** |
| ಒಟ್ಟು | **2*** | **6** | **3** | **-** | **-** | **1** | - | **1** | **13** |

* ಚಿಹ್ನೆ ಬ್ಯಾಕ್‌ಲಾಗ್ ಹುದ್ದೆಗಳನ್ನು ಸೂಚಿಸುತ್ತದೆ.

** ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 179 ಸೆನೆನಿ 2020 ದಿನಾಂಕ 14.07.2021 ರ ಪ್ರಕಾರ "ಇತರೆ" ವರ್ಗೀಕರಣವನ್ನು ಮಾಡಲಾಗಿದೆ.

೭. ಆಯ್ಕೆ ವಿಧಾನ: ಬೆರಳಚ್ಚುಗಾರರ ಹುದ್ದೆಯ ಆಯ್ಕೆಯನ್ನು ಈ ಮುಂದಿನ ಪರೀಕ್ಷೆಗಳಲ್ಲಿ ಅಭ್ಯರ್ಥಿಗಳು ತೋರಿಸಿದ ಸಾಮರ್ಥ್ಯದ ಆಧಾರದ ಮೇಲೆ ಮಾಡಲಾಗುತ್ತದೆ:

| ಕ್ರಮ ಸಂಖ್ಯೆ | ವಿವರಗಳು | ಗರಿಷ್ಠ ಅಂಕಗಳು | ಪರೀಕ್ಷೆಯಲ್ಲಿ ಉತ್ತೀರ್ಣರಾಗಲು ಪಡೆಯಬೇಕಾದ ಕನಿಷ್ಠ ಅಂಕಗಳು |
|---|---|---|---|
| 1 | ಬೆರಳಚ್ಚು ಪರೀಕ್ಷೆ | 100 | 60 |
| 2 | ಮೌಖಿಕ ಪರೀಕ್ಷೆ | 20 | 10 |
| | ಒಟ್ಟು | **120** | **70** |

ಮುಂದುವರಿದಿದೆ...

**ಸೂಚನೆ : ಕರ್ನಾಟಕ ಉಚ್ಚ ನ್ಯಾಯಾಲಯ ಸೇವಾ (ಆಯ್ಕೆಯ ಮೂಲಕ ನೇರ ನೇಮಕಾತಿ) ನಿಯಮಗಳು, 1984 ನಿಯಮ 5ರ ಪ್ರಕಾರ ಅಭ್ಯರ್ಥಿಗಳನ್ನು 1:5 ಅನುಪಾತದಲ್ಲಿ ಅರ್ಹತೆಯ ಆಧಾರದ ಮೇರೆಗೆ ಬೆರಳಚ್ಚು ಪರೀಕ್ಷೆಗೆ ಕರೆಯಲಾಗುವುದು.**

**8. ಅರ್ಜಿ ಮತ್ತು ಶುಲ್ಕವನ್ನು ಸಲ್ಲಿಸುವ ವಿಧಾನ :** ಅರ್ಜಿಯನ್ನು ಸಲ್ಲಿಸುವ ವಿಧಾನವು ವೆಬ್‌ಸೈಟ್‌ನ ಅನುಬಂಧದಲ್ಲಿ ಲಭ್ಯವಿರುವ ಮಾಹಿತಿಗಳಿಗೆ ಅನುಸಾರವಾಗಿ ಇರತಕ್ಕದ್ದು. ಈ ಮುಂದಿನ ವೆಬ್‌ಸೈಟ್‌ನ **https://karnatakajudiciary.kar.nic.in/recruitment.php** ಮೂಲಕ "ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸತಕ್ಕದ್ದು. **ಆನ್‌ಲೈನ್ ಮೂಲಕವಲ್ಲದೆ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.**

(ಎ) ಅಭ್ಯರ್ಥಿಗಳು (ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ – I ಕ್ಕೆ ಸೇರಿದ ಹಾಗೂ ದೈಹಿಕ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ) ಹುದ್ದೆಗೆ ಸಂಬಂಧಿಸಿದಂತೆ ನಿಗದಿ ಪಡಿಸಿದ ರೂ. 350/- (ಮುನ್ನೂರ ಐವತ್ತು ರೂಪಾಯಿಗಳು ಮಾತ್ರ) ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ – I ಕ್ಕೆ ಸೇರಿದ ಮತ್ತು ದೈಹಿಕ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ರೂ.200/- (ಎರಡು ನೂರು ರೂಪಾಯಿಗಳು ಮಾತ್ರ) ಅರ್ಜಿ ಶುಲ್ಕವನ್ನು, ಈ ಮುಂದಿನ ಯಾವುದೇ ವಿಧಾನಗಳ ಮೂಲಕ ಸಂದಾಯ / ಪಾವತಿ ಮಾಡತಕ್ಕದ್ದು:

೧. **ಆನ್‌ಲೈನ್ ಮೂಲಕ ಶುಲ್ಕ ಸಂದಾಯ :** ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಮೇಲೆ, ಅರ್ಜಿಯಲ್ಲಿ ಸೂಚಿಸಿದಂತಹ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಆನ್‌ಲೈನ್ ಪೇಮೆಂಟ್ ಗೇಟ್‌ವೇ ಮೂಲಕ ಶುಲ್ಕವನ್ನು ಸಂದಾಯ ಮಾಡತಕ್ಕದ್ದು.

ಅಥವಾ

೨. **ಚಲನ್ ನಮೂನೆಯಲ್ಲಿ ಶುಲ್ಕ ಸಂದಾಯ :** ಅಭ್ಯರ್ಥಿಗಳು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ಮೇಲೆ, ಅರ್ಜಿಯಲ್ಲಿ ಸೂಚಿಸಿದಂತಹ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಆನ್‌ಲೈನ್ ಪೇಮೆಂಟ್ ಗೇಟ್‌ವೇ ಮೂಲಕ PDF ನಮೂನೆಯಲ್ಲಿ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳತಕ್ಕದ್ದು ಮತ್ತು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದೇ ಶಾಖೆಯಲ್ಲಿ ನಿಗದಿಪಡಿಸಿದ ಶುಲ್ಕವನ್ನು ಪಾವತಿ ಮಾಡತಕ್ಕದ್ದು. (ನೀವು ಉಪಯೋಗಿಸುವ ಕಂಪ್ಯೂಟರ್ ಪಿ.ಡಿ.ಎಫ್ ರೀಡರ್–ಅಡೋಬ್ ಅಕ್ರೋಬ್ಯಾಟ್ ಸಪೋರ್ಟ್ ಹೊಂದಿರತಕ್ಕದ್ದು).

(ಬಿ) ಒಮ್ಮೆ ಪಾವತಿ ಮಾಡಿದ ಶುಲ್ಕವನ್ನು ಯಾವುದೇ ಸಂದರ್ಭದಲ್ಲೂ ಹಿಂತಿರುಗಿಸಲಾಗುವುದಿಲ್ಲ.

**ಮುಂದುವರಿದಿದೆ...**

೯. <u>ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ</u> :

ಆನ್‌ಲೈನ್ ಮೂಲಕ ನೊಂದಣಿಗಾಗಿ ಮತ್ತು ಅರ್ಜಿಯನ್ನು ಸಲ್ಲಿಸುವುದಕ್ಕಾಗಿ **27ನೇ ನವೆಂಬರ್ 2021** <u>(ರಾತ್ರಿ 11.59 ರವರೆಗೆ)</u>

ಆನ್‌ಲೈನ್ ಅಥವಾ ಚಲನ್ ಮೂಲಕ ಶುಲ್ಕವನ್ನು ಸಂದಾಯ ಮಾಡುವುದಕ್ಕಾಗಿ **30ನೇ ನವೆಂಬರ್ 2021** <u>(ಬ್ಯಾಂಕ್‌ಗಳ ಕೆಲಸದ ಸಮಯದಲ್ಲಿ)</u>

೧೦. <u>ಮೀಸಲಾತಿ ಕೋರುವ ಅಭ್ಯರ್ಥಿಗಳು</u> :

ಎ) 'ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ, ಪ್ರವರ್ಗ – I / II ಎ / II ಬಿ / III ಎ / III ಬಿ' ಪ್ರವರ್ಗಗಳಡಿಯಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಮತ್ತು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರು ಪಡಿಸುವುದು.

ಬಿ) **'ವಿಕಲಚೇತನ'** ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿದ ಪ್ರಮಾಣಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರು ಪಡಿಸುವುದು.

ಸಿ) **'ಮಾಜಿ ಸೈನಿಕ'** ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರು ಪಡಿಸುವುದು.

ಡಿ) **'ಕನ್ನಡ ಮಾಧ್ಯಮದ'** ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಕಡ್ಡಾಯವಾಗಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಬಗ್ಗೆ ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24.10.2002 ರನ್ವಯ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲುರುಜು ಹೊಂದಿರುವ ಪ್ರಮಾಣ ಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರು ಪಡಿಸುವುದು.

ಇ) **'ಗ್ರಾಮೀಣ ಅಭ್ಯರ್ಥಿ'** ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿರತಕ್ಕದ್ದು. ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 96 ಸೆನೆನಿ 2005 ದಿನಾಂಕ 10.08.2005 ರನ್ವಯ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲುರುಜುವಿನೊಂದಿಗೆ ನಿಗದಿ ಪಡಿಸಿದ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು ಮತ್ತು ಗ್ರಾಮೀಣ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸುವಂತಹ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲದಿರುವ

**ಮುಂದುವರಿದಿದೆ...**

ಬಗ್ಗೆ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 8 ಸೇನೆನಿ 2001 ದಿನಾಂಕ 13.02.2001 ರನ್ವಯ ನಮೂನೆ–1 ರಂತೆ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದ ಪ್ರಮಾಣ ಪತ್ರವನ್ನು ಸಹ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಮತ್ತು ಪ್ರಾಧಿಕಾರವು ನಿರ್ದೇಶಿಸಲ್ಪಟ್ಟಾಗ ತಪ್ಪದೆ ಹಾಜರು ಪಡಿಸುವುದು.

ಎಫ್) **'ಯೋಜನಾ ನಿರಾಶ್ರಿತರು'** ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೇನೆನಿ 99 ದಿನಾಂಕ 23-11-2000ರನ್ವಯ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು ಹಾಗೂ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಸದರಿ ಪ್ರಮಾಣ ಪತ್ರವನ್ನು ಹಾಜರುಪಡಿಸತಕ್ಕದ್ದು.

ಜಿ) **'ಸ್ಥಳೀಯ ವೃಂದ'** (ಸಂವಿಧಾನದ ಅನುಚ್ಛೇದ 371–ಜೆ ಅಡಿಯಲ್ಲಿನ ಹೈದರಾಬಾದ್–ಕರ್ನಾಟಕ ಪ್ರದೇಶ)ದಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು, ಕರ್ನಾಟಕ ಸರ್ಕಾರಿ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶ ಅರ್ಹತಾ ಪ್ರಮಾಣ ಪತ್ರಗಳು) ನಿಯಮಗಳು, 2013ರ ಅಡಿಯಲ್ಲಿ ಗೊತ್ತುಪಡಿಸಿದಂತೆ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸುವ ಕೊನೆಯ ದಿನಾಂಕ ಅಥವಾ ಅದಕ್ಕೂ ಮುಂಚಿತವಾಗಿಯೇ ಸಕ್ಷಮ ಪ್ರಾಧಿಕಾರವು ನೀಡುವ ಯುಕ್ತ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

ಎಚ್) **'ಇತರೆ'** ವರ್ಗೀಕರಣದ ಅಡಿಯಲ್ಲಿ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರವು ನೀಡಿರುವ ಪ್ರಮಾಣಪತ್ರವನ್ನು ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಮಯದಲ್ಲಿ ಹೊಂದಿರತಕ್ಕದ್ದು (Section 6 of The Transgender Persons (Protection of Rights) Act, 2019).

೧೧. ದಾಖಲೆಗಳ ಪರಿಶೀಲನೆ / ಬೆರಳಚ್ಚು ಪರೀಕ್ಷೆ ಹಾಗೂ ಮೌಖಿಕ ಸಂದರ್ಶನಕ್ಕೆ ಸಂಬಂಧಿಸಿದಂತೆ ಕರೆಯಲಾದ ಅಭ್ಯರ್ಥಿಗಳು ಪರಿಶೀಲನೆಗಾಗಿ ಶೈಕ್ಷಣಿಕ ವಿದ್ಯಾರ್ಹತೆ (ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಜನ್ಮ ದಿನಾಂಕ ಹೊಂದಿರುವ ಅಂಕಪಟ್ಟಿ), ಕನ್ನಡ ಮತ್ತು ಆಂಗ್ಲ ಕಿರಿಯ ಮತ್ತು ಹಿರಿಯ ದರ್ಜೆ ಬೆರಳಚ್ಚು ಅಂಕಪಟ್ಟಿಗಳು, ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ – ಸೆಮಿಸ್ಟರ್ಸ್ ಆದಲ್ಲಿ I to VI ಸೆಮಿಸ್ಟರ್ಸ್ ಅಥವ ವರ್ಷಗಳಲ್ಲಿದ್ದರೆ I to III ವರ್ಷಗಳ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್‌ನ ಅಂಕಪಟ್ಟಿ, ಪದವಿ ಅಂಕಪಟ್ಟಿ, ಪ್ರಮಾಣ ಪತ್ರ, ಜಾತಿ, ಹುಟ್ಟಿದ ದಿನಾಂಕಗಳಿಗೆ ಸಂಬಂಧಿಸಿದ ಅವಶ್ಯಕ ಮೂಲ ದಾಖಲೆಗಳನ್ನು ಮತ್ತು ಗ್ರಾಮೀಣ / ಅಂಗವಿಕಲ / ಮಾಜಿ ಸೈನಿಕ /ಕನ್ನಡ ಮಾಧ್ಯಮ / ಯೋಜನಾ ನಿರಾಶ್ರಿತರು / ವಿಧವೆ / ಇತರೆ ಮತ್ತು ಸ್ಥಳೀಯ ವೃಂದಕ್ಕಾಗಿ ಮೀಸಲಾತಿಯನ್ನು ಕೋರುವವರು ಸಂಬಂಧಿಸಿದ ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸತಕ್ಕದ್ದು.

**ಮುಂದುವರಿದಿದೆ...**

೧೨. ಅಭ್ಯರ್ಥಿಯ ಉತ್ತಮ ನಡತೆಯ ಒಂದು (ಅವನು/ಅವಳು ಓದಿದ ಸಂಸ್ಥೆ/ಕಾಲೇಜಿನ ಪ್ರಾಂಶುಪಾಲರಿಂದ ವಿದ್ಯಾಭ್ಯಾಸದ ವಿವರಗಳೊಂದಿಗೆ ಪಡೆದ ಒಂದು ಮತ್ತು ಅವನು/ಅವಳು ಚೆನ್ನಾಗಿ ಪರಿಚಯವಿರುವ ಹಾಗೂ ಸಂಬಂಧಿಯಾಗಿರದ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಪಡೆದು) ಪ್ರಮಾಣಪತ್ರಗಳನ್ನು ದಾಖಲಾತಿಗಳ ಪರಿಶೀಲನೆ ಸಮಯದಲ್ಲಿ ಹಾಜರುಮಾಡತಕ್ಕದ್ದು.

೧೩. ಅಭ್ಯರ್ಥಿಗಳು ಯಾವುದೇ ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರ ಅಥವಾ ಸಾರ್ವಜನಿಕ ಉದ್ದಿಮೆಗಳಲ್ಲಿ ಉದ್ಯೋಗ ಹೊಂದಿದ್ದರೆ, ಅಂತಹ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ **"ಹೌದು ಅಥವಾ ಇಲ್ಲ"** ಎಂಬುದನ್ನು ಅಯಾ ಕಾಲಂನಲ್ಲಿ ನಮೂದಿಸತಕ್ಕದ್ದು ಮತ್ತು ಅವರು ಆಯ್ಕೆಗೊಂಡ ಸಂದರ್ಭದಲ್ಲಿ ಅವರು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯಿಂದ "ನಿರಪೇಕ್ಷಣಾ ಪತ್ರ"ವನ್ನು ಒದಗಿಸತಕ್ಕದ್ದು.

೧೪. ಬೆರಳಚ್ಚು ಪರೀಕ್ಷೆಗೆ / ಮೌಖಿಕ ಸಂದರ್ಶನಕ್ಕೆ ಕರೆಯಲಾಗುವ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

೧೫. ಬೆರಳಚ್ಚುಗಾರರ ಹುದ್ದೆಗೆ ಅಂತಿಮವಾಗಿ ಆಯ್ಕೆಯಾದ ಅಭ್ಯರ್ಥಿಗಳನ್ನು ಬೆಂಗಳೂರಿನಲ್ಲಿನ ಪ್ರಧಾನ ಪೀಠದಲ್ಲಾಗಲೀ ಅಥವಾ ಧಾರವಾಡ ಅಥವಾ ಕಲಬುರಗಿಗಳಲ್ಲಿನ ಪೀಠಗಳಲ್ಲಾಗಲೀ ನಿಯೋಜಿಸಬಹುದು.

೧೬. ಅಭ್ಯರ್ಥಿಗಳು ಅಭ್ಯರ್ಥಿಕೆಯ ಸಂದರ್ಭದಲ್ಲಿ ಸಿಬ್ಬಂದಿ ಅಥವಾ ಸಿಬ್ಬಂದಿಯೇತರ ಮೂಲಗಳ ಮೂಲಕ ಯಾವುದೇ ರೀತಿಯ ಬಾಹ್ಯ ಬೆಂಬಲವನ್ನು ಪಡೆಯುವ ಪ್ರಯತ್ನ ಮಾಡಿದಲ್ಲಿ ಅಂತಹ ಅಭ್ಯರ್ಥಿಗಳ **ನೇಮಕಾತಿಯನ್ನು / ಅಭ್ಯರ್ಥಿಕೆಯನ್ನು** ಅನರ್ಹಗೊಳಿಸಲಾಗುವುದು.

೧೭. **ಪರಿಶೀಲನೆಯ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆತನ/ಆಕೆಯ ಅಭ್ಯರ್ಥಿಕೆಯು ರದ್ದಾಗುತ್ತದೆ ಮತ್ತು ಅವರ ವಿರುದ್ಧ ತಪ್ಪು ಮಾಹಿತಿಯನ್ನು ಒದಗಿಸಿರುವುದಕ್ಕೆ ಸಂಬಂಧಿಸಿದಂತೆ ಕ್ರಿಮಿನಲ್ ವ್ಯವಹರಣೆಯನ್ನು ಜರುಗಿಸಲಾಗುವುದು.**

**ಮಾನ್ಯ ಮುಖ್ಯ ನ್ಯಾಯಮೂರ್ತಿಗಳ ಆದೇಶಾನುಸಾರ,**
**ಸಹಿ/-**

**(ಟಿ. ಜಿ. ಶಿವಶಂಕರೇ ಗೌಡ)**
**ಮಹಾವಿಲೇಖನಾಧಿಕಾರಿ**
**ಕರ್ನಾಟಕ ಉಚ್ಚ ನ್ಯಾಯಾಲಯ**
**ಬೆಂಗಳೂರು – 560001**